ಸದನದಲ್ಲಿ ಉತ್ತರಿಸುವ
ಪ್ರಶ್ನೆಗಳ ಪಟ್ಟಿ
ಒಟ್ಟು ಪ್ರಶ್ನೆಗಳು – ೧೫

ಪಟ್ಟಿ–೨

# ಕರ್ನಾಟಕ ವಿಧಾನ ಪರಿಷತ್ತು

## ನೂರ ಇಪ್ಪತ್ತೊಂಬತ್ತನೇ ಅಧಿವೇಶನ

**ಮಂಗಳವಾರ, ದಿನಾಂಕ: ೩೦ನೇ ಜೂನ್, ೨೦೧೫**

---

**ಸಮೂಹ – II**

೧. ಇಂಧನ ಸಚಿವರು

೨. ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳು ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು

೩. ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು

೪. ಲೋಕೋಪಯೋಗಿ ಸಚಿವರು

೫. ಸಹಕಾರ ಮತ್ತು ಸಕ್ಕರೆ ಸಚಿವರು

೬. ಕೃಷಿ ರಾಜ್ಯ ಸಚಿವರು

---

## ಕೃಷಿ ಭೂಮಿಯ ಅಕ್ರಮ ಖಾತೆ

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು)–**

೧೬ (೩೦೬) ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳು ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಬೀದರ್ ನಗರ ಸಭೆ ವ್ಯಾಪ್ತಿಯಲ್ಲಿ ಕೃಷಿ ಭೂಮಿಯನ್ನು ಅಕ್ರಮವಾಗಿ ಖಾತೆ ಮಾಡಿರುವುದು ಮತ್ತು ಅಕ್ರಮ ಖಾತೆಗಳಿಗೆ ಸಂಬಂಧಿಸಿದ ದಾಖಲೆಗಳು ಕಾಣೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಈ ಅವ್ಯವಹಾರದಲ್ಲಿ ಭಾಗಿಯಾಗಿರುವ ಮತ್ತು ಹಣಕಾಸು ದುರುಪಯೋಗಪಡಿಸಿಕೊಂಡಿರುವ ಅಧಿಕಾರಿ / ನೌಕರರು ಯಾರು ; ಸಂಬಂಧಪಟ್ಟವರ ವಿರುದ್ಧ ಯಾವ ಕ್ರಮ ಕೈಗೊಳ್ಳಲಾಗಿದೆ ; (ಪ್ರಕರಣವಾರು ಹೆಸರು ಹಾಗೂ ಹುದ್ದೆ ಸಹಿತ ವಿವರ ನೀಡುವುದು)

(ಇ) ಕೃಷಿ ಭೂಮಿಯನ್ನು ಅಕ್ರಮವಾಗಿ ಖಾತೆ ಮಾಡಿರುವುದರಿಂದ ಸರ್ಕಾರಕ್ಕೆ ಎಷ್ಟು ಪ್ರಮಾಣದ ಆರ್ಥಿಕ ನಷ್ಟ ಉಂಟಾಗಿರುತ್ತದೆ ? (ಸಂಪೂರ್ಣ ಮಾಹಿತಿ ನೀಡುವುದು)

## ಲೋಕೋಪಯೋಗಿ ಇಲಾಖೆಯ ಗುತ್ತಿಗೆದಾರರಿಗೆ ಹಣ ಪಾವತಿಸುವಲ್ಲಿ ವಿಳಂಬ

**ಶ್ರೀ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) –**

೧೭ (೨೩೮) ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಲೋಕೋಪಯೋಗಿ ಇಲಾಖೆಯ ಗುತ್ತಿಗೆದಾರರಿಗೆ, ಕಾಮಗಾರಿ ಮುಗಿದಿದ್ದೂ ಹಣ ಪಾವತಿಯಾಗದೆ ಬಾಕಿ ಉಳಿದಿರುವ ಮೊತ್ತವೆಷ್ಟು ; ಇದಕ್ಕೆ ಕಾರಣಗಳೇನು ; (ವಿವರ ನೀಡುವುದು)

(ಆ) ಬಾಕಿ ಇರುವ ಹಣ ಬಿಡುಗಡೆ ಮಾಡಲು ಅನುಸರಿಸುತ್ತಿರುವ ಮಾನದಂಡಗಳೇನು ;

(ಇ) ಈ ಹಣ ಬಿಡುಗಡೆ ಮಾಡುವಲ್ಲಿ ಪಾರದರ್ಶಕತೆ ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಬಾಕಿ ಇರುವ ಹಣವನ್ನು ಬಿಡುಗಡೆ ಮಾಡುವಲ್ಲಿ ಪಾರದರ್ಶಕ ವ್ಯವಸ್ಥೆಯನ್ನು ಅಳವಡಿಸಲು ಸರ್ಕಾರ ಯಾವ ಕ್ರಮ ಜರುಗಿಸುವುದು ?

## ಮಾವಿನ ಮರಗಳು ಒಣಗುತ್ತಿರುವ ಕುರಿತು

**ಶ್ರೀ ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) –**

೧೮ (೨೭೬) ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಕೋಲಾರ, ಚಿಕ್ಕಬಳ್ಳಾಪುರ ಹಾಗೂ ಬೆಂಗಳೂರು ಗ್ರಾಮಾಂತರ ಜಿಲ್ಲೆಗಳಲ್ಲಿ ಮಾವಿನ ಮರಗಳು ಒಣಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬಂದಿದ್ದರೆ, ಎಷ್ಟು ಹೆಕ್ಟೇರ್ ಪ್ರದೇಶದಲ್ಲಿ ಮಾವಿನ ಮರಗಳು ನಾಶವಾಗಿವೆ; ಹಾಗೂ ಎಷ್ಟು ಜನ ಮಾವಿನ ಬೆಳೆಗಾರರಿಗೆ ನಷ್ಟ ಉಂಟಾಗಿದೆ ; (ತಾಲ್ಲೂಕುವಾರು ಪಟ್ಟಿ ನೀಡುವುದು)

(ಇ) ಮಾವಿನ ಮರಗಳು ಈ ರೀತಿ ಒಣಗುತ್ತಿರುವುದಕ್ಕೆ ನಿಖರವಾದ ಕಾರಣಗಳೇನು;

(ಈ) ಈ ರೀತಿ ಮಾವಿನ ಮರಗಳು ಒಣಗುವುದನ್ನು ತಡೆಗಟ್ಟಲು/ನಿವಾರಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ? (ಮಾಹಿತಿ ನೀಡುವುದು)

## ಬಳ್ಳಾರಿ ಜಿಲ್ಲೆಯ ನಗರೋತ್ಥಾನ ಯೋಜನೆಯಡಿ ಕೈಗೊಂಡ ಕಾಮಗಾರಿಗಳ ಕುರಿತು

**ಶ್ರೀ ಮೃತ್ಯಂಜಯ ಜಿನಗಾ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೧೯ (೩೦೫) ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳು ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಕಳೆದ ಎರಡು ವರ್ಷಗಳಲ್ಲಿ ಬಳ್ಳಾರಿ ಜಿಲ್ಲೆಯಲ್ಲಿ ನಗರೋತ್ಥಾನ ಯೋಜನೆಯಡಿ ಒದಗಿಸಲಾಗಿರುವ ಅನುದಾನ ಎಷ್ಟು ; (ವಿವರ ನೀಡುವುದು)

(ಆ) ಈ ಯೋಜನೆಯಡಿ ಕೈಗೊಂಡ ಕಾಮಗಾರಿಗಳು ಯಾವುವು ; (ತಾಲ್ಲೂಕುವಾರು ವಿವರ ನೀಡುವುದು)

(ಇ) ಜಿಲ್ಲೆಯಲ್ಲಿ ಬಹಳಷ್ಟು ನಗರ ಸಭೆ ಮತ್ತು ಪುರಸಭೆ ವ್ಯಾಪ್ತಿಯಲ್ಲಿ ಮೂಲಭೂತ ಸೌಕರ್ಯಗಳ ಕೊರತೆಯಿಂದ ಸಾರ್ವಜನಿಕರಿಗೆ ತೊಂದರೆಯಾಗಿರುವುದರಿಂದ ಮೂಲಭೂತ ಸೌಕರ್ಯ ಒದಗಿಸಲು ಸರ್ಕಾರ ತುರ್ತಾಗಿ ಕೈಗೊಳ್ಳಲಿರುವ ಕ್ರಮಗಳಾವುವು ?

## ರೈತರ ಕಬ್ಬಿಗೆ ಬಾಕಿ ಹಣ ಪಾವತಿ

**ಶ್ರೀ ಬಿ. ರಾಮಕೃಷ್ಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೨೦ (೧೭೬) ಸಹಕಾರ ಮತ್ತು ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯದಲ್ಲಿ ಸಕ್ಕರೆ ಕಾರ್ಖಾನೆಗೆ ಸರಬರಾಜು ಮಾಡಿರುವ ಕಬ್ಬಿಗೆ ಕಾರ್ಖಾನೆ ಮಾಲೀಕರು ಹಣ ಪಾವತಿ ಮಾಡದೆ ರೈತರು ಆತ್ಮಹತ್ಯೆ ಮಾಡಿಕೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಇದುವರೆವಿಗೂ ಎಷ್ಟು ರೈತರು ಆತ್ಮಹತ್ಯೆ ಮಾಡಿಕೊಂಡಿದ್ದಾರೆ; (ಕಳೆದ ೩ ವರ್ಷಗಳ ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಆತ್ಮಹತ್ಯೆ ಮಾಡಿಕೊಂಡ ರೈತರಿಗೆ ಸರ್ಕಾರದಿಂದ ಪರಿಹಾರ ನೀಡಲಾಗಿದೆಯೇ; ನೀಡಿದ್ದಲ್ಲಿ, ಯಾವ ರೀತಿ ಪರಿಹಾರ ನೀಡಿದೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಈ) ಬಾಕಿ ಹಣ ಪಾವತಿ ಮಾಡದೆ ಇರುವ ಕಾರ್ಖಾನೆಗಳ ಮೇಲೆ ಸರ್ಕಾರ ಕೈಗೊಂಡ ಕ್ರಮಗಳೇನು ? (ಪೂರ್ಣ ವಿವರ ನೀಡುವುದು)

## ಕಬ್ಬು ಸರಬರಾಜುದಾರರಿಗೆ ಬಾಕಿ ಪಾವತಿಸುವ ಬಗ್ಗೆ

**ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ) –**

೨೧ (೨೯೭) ಸಹಕಾರ ಮತ್ತು ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಕಳೆದ ಸಾಲಿನಲ್ಲಿ ಸರ್ಕಾರ ಘೋಷಣೆ ಮಾಡಿದಂತೆ ಎಷ್ಟು ಸಕ್ಕರೆ ಕಾರ್ಖಾನೆಗಳು ಪೂರ್ಣ ಪ್ರಮಾಣದಲ್ಲಿ ಕಬ್ಬು ಬೆಳೆಗಾರರಿಗೆ ಹಣ ಪಾವತಿ ಮಾಡಿವೆ ; (ಕಾರ್ಖಾನೆವಾರು ವಿವರ ನೀಡುವುದು)

(ಆ) ಬಾಕಿ ಪಾವತಿಸಬೇಕಾಗಿರುವ ಕಾರ್ಖಾನೆಗಳ ಸಂಖ್ಯೆ ಎಷ್ಟು ; ಪಾವತಿಸಬೇಕಾಗಿರುವ ಮೊತ್ತ ಎಷ್ಟು ; (ವಿವರ ನೀಡುವುದು)

(ಇ) ಇದುವರೆವಿಗೂ ಬಾಕಿ ಉಳಿಸಿಕೊಂಡಿರುವ ಕಾರ್ಖಾನೆಗಳ ಮೇಲೆ ಬಾಕಿ ಪಾವತಿಸುವ ಸಂಬಂಧ ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಈ) ಯಾವ ಕಾಲಮಿತಿಯೊಳಗೆ ಪಾವತಿಸಲು ಕ್ರಮ ಕೈಗೊಳ್ಳಲಾಗುವುದು ?

## ಉತ್ತರ ಕರ್ನಾಟಕ ಜಿಲ್ಲೆಯಲ್ಲಿ ಹದಗೆಟ್ಟಿರುವ ರಸ್ತೆಗಳು

**ಡಾ॥ ಜಯಮಾಲ ರಾಮಚಂದ್ರ (ನಾಮನಿರ್ದೇಶನ ಹೊಂದಿದವರು) –**

೨೨ (೩೮) ಲೋಕೋಪಯೋಗಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಉತ್ತರ ಕರ್ನಾಟಕ ಜಿಲ್ಲೆಗಳಲ್ಲಿ ಲೋಕೋಪಯೋಗಿ ಇಲಾಖೆ ವ್ಯಾಪ್ತಿಯ ರಸ್ತೆಗಳ ವಿಸ್ತೀರ್ಣ ಎಷ್ಟು ; (ಜಿಲ್ಲಾವಾರು ಉದ್ದ ಮತ್ತು ಅಗಲವನ್ನು ಕಿ.ಮೀ. ಲೆಕ್ಕದಲ್ಲಿ ವಿವರ ನೀಡುವುದು)

(ಆ) ಈ ರಸ್ತೆಗಳ ಪೈಕಿ ಸಂಚಾರಕ್ಕೆ ಯೋಗ್ಯವಾಗಿರುವ ಮತ್ತು ಯೋಗ್ಯವಲ್ಲದ ರಸ್ತೆಗಳು ಯಾವುವು ; (ಜಿಲ್ಲೆ ಮತ್ತು ಕಿ.ಮೀ.ವಾರು ವಿವರ ನೀಡುವುದು)

(ಇ) ಸಂಚಾರಕ್ಕೆ ಯೋಗ್ಯವಲ್ಲದ ರಸ್ತೆಗಳನ್ನು ಯಾವ ಅವಧಿಯೊಳಗೆ ದುರಸ್ಥಿ ಪಡಿಸಲಾಗುವುದು ?

## ರಾಜ್ಯದಲ್ಲಿ ಉತ್ಪಾದನೆಯಾಗುವ ವಿದ್ಯುತ್ ಕುರಿತು

**ಶ್ರೀ ಜಿ.ಎಸ್. ನ್ಯಾಮಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೨೩ (೨೪೮) ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯದಲ್ಲಿ ಅಣುವಿದ್ಯುತ್, ಹೈಡ್ರೋ, ಪರ್ವ, ಸೌರಶಕ್ತಿ, ಸಕ್ಕರೆ ಕಾರ್ಖಾನೆಗಳಿಂದ ಇತರೆ ಎಲ್ಲಾ ಮೂಲಗಳಿಂದ ಒಟ್ಟು ಉತ್ಪಾದನೆಯಾಗುತ್ತಿರುವ ವಿದ್ಯುಚ್ಛಕ್ತಿ ಎಷ್ಟು ;

(ಆ) ಪ್ರಸ್ತುತ ಇರುವ ಇಂಧನದ ಬೇಡಿಕೆ ಪ್ರಮಾಣ ಎಷ್ಟು ; ಹಾಗೂ ಉಂಟಾಗುವ ಕೊರತೆ ಎಷ್ಟು ; (ವಿವರ ನೀಡುವುದು)

(ಇ) ಕೊರತೆಯನ್ನು ಸರಿದೂಗಿಸಲು ಅನುಸರಿಸುತ್ತಿರುವ ವಿಧಾನಗಳು ಯಾವುವು; ಯಾವ ಯಾವ ಮೂಲಗಳಿಂದ ವಿದ್ಯುತ್‌ನ್ನು ಖರೀದಿಸಲಾಗುವುದು ; ಯಾವ ಯಾವ ದರದಲ್ಲಿ ಖರೀದಿಸಲಾಗುವುದು ; ಸರ್ಕಾರ ವಿದ್ಯುತ್ ಖರೀದಿಗೆ ಎಷ್ಟು ಹಣ ವಿನಿಯೋಗಿಸುವುದು ;

(ಈ) ಇಂಧನದ ಉತ್ಪಾದನೆಯನ್ನು ಹೆಚ್ಚಿಸಲು ಇಲಾಖೆ ಕೈಗೊಂಡಿರುವ ಕ್ರಮಗಳು ಯಾವುವು ?

## ರಾಯಚೂರು ಜಿಲ್ಲೆಯಲ್ಲಿ ಉತ್ಪಾದನೆ ಆಗುತ್ತಿರುವ ವಿದ್ಯುತ್ ಪ್ರಮಾಣದ ಬಗ್ಗೆ

**ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು) –**

೨೪ (೨೫೭) ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಯಚೂರು ಜಿಲ್ಲೆಯಲ್ಲಿ ಕರ್ನಾಟಕ ವಿದ್ಯುತ್ ಪ್ರಸರಣ ನಿಗಮದ ಮುಖಾಂತರ ಹಾಗೂ ಇತರೆ ಯೋಜನೆಗಳ ಮುಖಾಂತರ ಉತ್ಪಾದನೆಯಾಗುವ ವಿದ್ಯುತ್ ಮೆಗಾವ್ಯಾಟ್ಸ್ ಎಷ್ಟು ; ಉತ್ಪಾದನೆ ಆಗುತ್ತಿರುವ ಮೆಗಾವ್ಯಾಟ್ಸ್ ಪ್ರಮಾಣ ಎಷ್ಟು ;

(ಆ) ರೈತರ ಪಂಪ್‌ಸೆಟ್‌ಗಳಿಗೆ ಪ್ರತಿ ದಿನ ೨೪ ಗಂಟೆ ವಿದ್ಯುತ್ ಸರಬರಾಜು ಮಾಡುವ ಯೋಜನೆ ಸರಕಾರದ ಪರಿಶೀಲನೆಯಲ್ಲಿದೆಯೇ ;

(ಇ) ರಾಯಚೂರು ಹಾಗೂ ಮಾನ್ವಿ ತಾಲ್ಲೂಕುಗಳಲ್ಲಿ ೧೧೦/೧೧ ಕೆ.ಬಿ. ಪ್ರಸ್ತುತ ಸಬ್ ಸ್ಟೇಷನ್ ವರ್ಕ್ ಚಾಲನೆಯಲ್ಲಿದೆಯೇ ;

(ಈ) ರಾಯಚೂರು ಹಾಗೂ ಮಾನ್ವಿ ತಾಲ್ಲೂಕುಗಳಲ್ಲಿ ೧೧೦/೧೧ ಕೆ.ಬಿ. ಉಪ ವಿಭಾಗಗಳ (Sub Station) ನ್ನು ಸ್ಥಾಪಿಸುವ ಬಗ್ಗೆ ಬಂದಿರುವ ಪ್ರಸ್ತಾವನೆಗಳೆಷ್ಟು ;

(ಉ) ರಾಯಚೂರು ಜಿಲ್ಲೆಯ ೨೨೦ ಕೆ.ಬಿ. ಸ್ಟೇಷನ್‌ಗೆ ಪ್ರತಿ ನಿತ್ಯ ಬೇಕಾಗಿರುವ ವಿದ್ಯುತ್ ಮೆಗಾವ್ಯಾಟ್ಸ್ ಎಷ್ಟು ; ಸರಾಸರಿ ವಿತರಣೆಯಾಗುವ ಮೆಗಾವ್ಯಾಟ್ಸ್ ಎಷ್ಟು ;

(ಊ) ರೈತರ ಪಂಪ್ ಸೆಟ್‌ಗಳಿಗೆ ೨೪ ಗಂಟೆ ವಿದ್ಯುತ್ ಸರಬರಾಜು ಮಾಡುವ ಉದ್ದೇಶಕ್ಕಾಗಿ ಹೆಚ್.ಟಿ.ಲೈನ್ (High Thermal Line) ಸ್ಕೀಮ್ ರಾಜ್ಯದ ಯಾವ ಯಾವ ಜಿಲ್ಲೆಗಳಲ್ಲಿ ಕಾರ್ಯರೂಪಗೊಂಡಿದೆ ;

(ಋ) ಪ್ರತಿ ಯೂನಿಟ್‌ಗೆ ನಿಗದಿಪಡಿಸಿರುವ ದರ ಎಷ್ಟು ?

## ಪುರಸಭೆಗೆ ನಿರ್ದೇಶಕರ ಭೇಟಿ

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೨೫ (೨೮೫) ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳು ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯ ಪೌರಾಡಳಿತ ನಿರ್ದೇಶಕರು, ಆಯುಕ್ತರು ಕಳೆದ ಒಂದು ವರ್ಷದಲ್ಲಿ ಎಷ್ಟು ಬಾರಿ ಯಾವ ಯಾವ ಪುರಸಭೆ, ನಗರ ಸ್ಥಳೀಯ ಸಂಸ್ಥೆಗಳಿಗೆ ಭೇಟಿ ನೀಡಿರುತ್ತಾರೆ ; (ದಿನಾಂಕ ಸಹಿತ ವಿವರ ನೀಡುವುದು)

(ಆ) ಭೇಟಿಯ ಸಂದರ್ಭದಲ್ಲಿ, ಭೇಟಿಯ ನಂತರ ಆಡಳಿತ ಸುಧಾರಣಾ ಮಾರ್ಗಸೂಚಿಗಳನ್ನು ಹೊರಡಿಸಿರುತ್ತಾರೆಯೇ ; (ಹೌದಾದಲ್ಲಿ, ಪ್ರತಿ ನೀಡುವುದು)

(ಇ) ಪುರಸಭೆ, ಸ್ಥಳೀಯ ಸಂಸ್ಥೆ, ನಗರ ಸಭೆಗಳ ಚುನಾಯಿತ ಪ್ರತಿನಿಧಿಗಳ ತರಬೇತಿಯಲ್ಲಿ ನಿರ್ದೇಶಕರು / ಆಯುಕ್ತರು ಎಷ್ಟು ಬಾರಿ ಭೇಟಿ ನೀಡಿ ಮಾರ್ಗದರ್ಶನ ನೀಡಿರುತ್ತಾರೆ ? (ದಿನಾಂಕ ಸಹಿತ ವಿವರ ನೀಡುವುದು)

## ಬೆಳಗಾವಿ ನಗರದಲ್ಲಿರುವ ಕೃಷಿ ಮತ್ತು ತರಕಾರಿ ಮಾರುಕಟ್ಟೆಗಳನ್ನು ಅಭಿವೃದ್ಧಿಪಡಿಸುವುದು

**ಶ್ರೀ ಮಹಾಂತೇಶ್ ಶಿವಾನಂದ ಕೌಜಲಗಿ (ಪದವೀಧರರ ಕ್ಷೇತ್ರ) –**

೨೬ (೩೦೧) ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಬೆಳಗಾವಿ ನಗರದಲ್ಲಿರುವ ಕೃಷಿ ಮಾರುಕಟ್ಟೆ ಹಾಗೂ ತರಕಾರಿ ಮಾರುಕಟ್ಟೆ ಅಭಿವೃದ್ಧಿಗಾಗಿ ಸ್ಥಳೀಯ ಕೃಷಿ ಮಾರುಕಟ್ಟೆ ಅಧ್ಯಕ್ಷರು ಸಂಪೂರ್ಣವಾದ ನೀಲಿ ನಕ್ಷೆಯೊಂದಿಗೆ ಮನವಿ ಸಲ್ಲಿಸಿರುವುದು ನಿಜವೇ ;

(ಆ) ಸದರಿ ಕೃಷಿ ಮಾರುಕಟ್ಟೆ ಹಾಗೂ ತರಕಾರಿ ಮಾರುಕಟ್ಟೆ ಅಭಿವೃದ್ಧಿಗಾಗಿ ಬೇಕಾಗುವ ಹಣವೆಷ್ಟು ;

(ಇ) ಸದರಿ ಹಣವನ್ನು ಕೂಡಲೇ ಬಿಡುಗಡೆ ಮಾಡಿ ಅಭಿವೃದ್ಧಿ ಪಡಿಸಲು ಕ್ರಮ ಕೈಗೊಳ್ಳಲಾಗುವುದೇ ?

## ಎತ್ತಿನ ಹೊಳೆ, ಕಾಡುಮನೆ ಹೊಳೆ, ಹೊಂಗದಹಳ್ಳ, ಕೆರಿಹೊಳೆಯಲ್ಲಿರುವ ಜಲವಿದ್ಯುತ್ ಉತ್ಪಾದನಾ ಘಟಕಗಳ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೨೭ (೩೩) ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಎತ್ತಿನ ಹೊಳೆ, ಕಾಡುಮನೆ ಹೊಳೆ, ಹೊಂಗದಹಳ್ಳ, ಕೆರಿಹೊಳೆಯ ಕೆಳಭಾಗದಲ್ಲಿ ಕಾರ್ಯ ನಿರ್ವಹಿಸುತ್ತಿರುವ ಜಲವಿದ್ಯುತ್ ಉತ್ಪಾದನಾ ಘಟಕಗಳು ಎಷ್ಟು ; ಅವು ಯಾವುವು ;

(ಆ) ಸರ್ಕಾರ ನವೀಕರಿಸಬಹುದಾದ ಇಂಧನಗಳ ಅಭಿವೃದ್ಧಿ ನಿಗಮ (KREDL) ಕ್ಕೆ ಸಲ್ಲಿಸಲಾದ ವಿಸ್ತೃತ ಯೋಜನಾ ವರದಿ (DPR) ಯಂತೆ ಈ ಜಲವಿದ್ಯುತ್ ಉತ್ಪಾದನಾ ಘಟಕಗಳು ವಿದ್ಯುತ್ ಉತ್ಪಾದನೆ ಮಾಡುತ್ತಿವೆಯೇ ; ಮಾಡುತ್ತಿದ್ದಲ್ಲಿ, ವಿಸ್ತೃತ ಯೋಜನಾ ವರದಿಯ ಶೇಕಡವಾರು ಎಷ್ಟು ಪ್ರಮಾಣದ ವಿದ್ಯುತ್ ಉತ್ಪಾದನೆ ಮಾಡುತ್ತಿವೆ ; ವಿಸ್ತೃತ ಯೋಜನಾ ವರದಿಯಲ್ಲಿನ ಪ್ರಕಾರ ವಿದ್ಯುತ್ ಉತ್ಪಾದನೆಯಲ್ಲಿ ವ್ಯತ್ಯಾಸವಿದ್ದರೆ ಎಷ್ಟು ಪ್ರಮಾಣದ ವ್ಯತ್ಯಾಸವಿದೆ ; ಇದಕ್ಕೆ ಕಾರಣವೇನು ?

## ಕೃಷಿ ಭಾಗ್ಯ ಯೋಜನೆ ಕುರಿತು

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೨೮ (೨೨೦) ಕೃಷಿ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯದಲ್ಲಿ ಜಾರಿಗೆ ತರಲಾಗಿರುವ ಕೃಷಿ ಭಾಗ್ಯ ಯೋಜನೆಯು ನಿಗದಿತ ಅವಧಿಯಲ್ಲಿ ಅನುಷ್ಠಾನವಾಗದೆ ಇರುವ ವಿಚಾರ ಸರಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಬೆಳಗಾವಿ ಜಿಲ್ಲೆಯಲ್ಲಿ ಸನ್ ೨೦೧೫–೧೬ನೇ ಸಾಲಿನಲ್ಲಿ ಎಷ್ಟು ಜನ ರೈತ ಫಲಾನುಭವಿಗಳನ್ನು ಆಯ್ಕೆ ಮಾಡಲಾಗಿದೆ ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಇ) ಜಿಲ್ಲೆಯಲ್ಲಿ ಆಯ್ಕೆಯಾದ ಫಲಾನುಭವಿಗಳಿಗೆ ಸನ್ ೨೦೧೪–೧೫ನೇ ಸಾಲಿನಲ್ಲಿ ಯೋಜನೆಯಲ್ಲಿರುವ ಕಾಮಗಾರಿಗಳನ್ನು ಪೂರ್ಣಗೊಳಿಸಲು ನಿಗದಿಪಡಿಸಿದ ಅವಧಿ ಎಷ್ಟು ; ಆಯ್ಕೆಯಾದ ಫಲಾನುಭವಿಗಳಲ್ಲಿ ಎಷ್ಟು ಜನರು ಕಾಮಗಾರಿಗಳನ್ನು ಪೂರ್ಣಗೊಳಿಸಿರುತ್ತಾರೆ ; ಪೂರ್ಣಗೊಳಸದೆ ಇದ್ದ ಫಲಾನುಭವಿಗಳು ಎಷ್ಟು ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಈ) ಬೆಳಗಾವಿ ಜಿಲ್ಲೆಗೆ ೨೦೧೪–೧೫ನೇ ಸಾಲಿನಲ್ಲಿ ಬಿಡುಗಡೆಯಾದ ಅನುದಾನವೆಷ್ಟು; ಅದರಲ್ಲಿ ಬಳಕೆ ಮಾಡಿದ ಅನುದಾನವೆಷ್ಟು ; ಅನುದಾನವನ್ನು ನೇರವಾಗಿ ರೈತರ ಖಾತೆಗಳಿಗೆ ವರ್ಗಾಯಿಸಲಾಗಿದೆಯೇ; ಬಳಕೆಯಾಗದೆ ಬಾಕಿ ಉಳಿದಿರುವ ಅನುದಾನವೆಷ್ಟು ; ಅನುದಾನ ಬಾಕಿ ಉಳಿಯಲು ಕಾರಣಗಳೇನು ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಉ) ೨೦೧೫–೧೬ನೇ ಸಾಲಿಗೆ ಈ ಯೋಜನೆಯಡಿ ಬೆಳಗಾವಿ ಜಿಲ್ಲೆಗೆ ನಿಗದಿಪಡಿಸಿದ ಗುರಿ ಎಷ್ಟು ; ಕಾಯ್ದಿರಿಸಿದ ಅನುದಾನವೆಷ್ಟು ? (ತಾಲ್ಲೂಕುವಾರು ಮಾಹಿತಿ ನೀಡುವುದು)

## ರಾಜ್ಯದಲ್ಲಿರುವ ಸಾರ್ವಜನಿಕ ಉದ್ದಿಮೆಗಳ ಕುರಿತು

**ಶ್ರೀ ಡಿ.ಎಸ್. ವೀರಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) –**

೨೯ (೧೭೫) ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳು ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯದಲ್ಲಿರುವ ಸಾರ್ವಜನಿಕ ಉದ್ದಿಮೆಗಳ ಸಂಖ್ಯೆ ಎಷ್ಟು ; ಅವುಗಳು ಯಾವುವು ; ಈ ಉದ್ದಿಮೆಗಳ ಪೈಕಿ ಎಷ್ಟು ಉದ್ದಿಮೆಗಳು ಲಾಭದಲ್ಲಿ ಹಾಗೂ ನಷ್ಟದಲ್ಲಿ ನಡೆಯುತ್ತಿವೆ ; ಅವು ಯಾವುವು ;

(ಆ) ನಷ್ಟದಲ್ಲಿರುವ ಉದ್ದಿಮೆಗಳನ್ನು ಲಾಭದಾಯಕ ಮಾಡಲು ಸರ್ಕಾರ ತೆಗೆದುಕೊಂಡ ಕ್ರಮವೇನು ?

## ಗುಡ್ಡಗಾಡು / ಮಲೆನಾಡು ಪ್ರದೇಶಗಳಲ್ಲಿನ ಹಳ್ಳಿಗಳಿಗೆ ವಿದ್ಯುತ್ ಸಂಪರ್ಕವಿಲ್ಲದಿರುವ ಬಗ್ಗೆ

**ಶ್ರೀಮತಿ ವಿಮಲಾಗೌಡ (ವಿಧಾನಸಭೆಯಿಂದ ಚುನಾಯಿತರಾದವರು) –**

೩೦ (೨೧೩) ಇಂಧನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯದಲ್ಲಿನ ಗುಡ್ಡಗಾಡು ಮತ್ತು ಮಲೆನಾಡು ಪ್ರದೇಶಗಳ ವ್ಯಾಪ್ತಿಯಲ್ಲಿ ಬರುವಂತಹ ಹಳ್ಳಿಗಳಲ್ಲಿ ವಿದ್ಯುತ್ ಸಂಪರ್ಕ ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದರೆ, ಇಂತಹ ಎಷ್ಟು ಹಳ್ಳಿಗಳು ವಿದ್ಯುತ್ ಸಂಪರ್ಕದಿಂದ ದೂರ ಉಳಿದಿವೆ ; (ಪ್ರದೇಶಾವಾರು ಮಾಹಿತಿ ನೀಡುವುದು)

(ಇ) ಹೆಚ್ಚಿನ ಸಂಖ್ಯೆಯಲ್ಲಿ ಸೋಲಿಗರು ಮತ್ತು ನಿರ್ಗತಿಕರು ವಾಸಿಸುವ ಈ ಸ್ಥಳಗಳಲ್ಲಿ ವಿದ್ಯುತ್ ಸಂಪರ್ಕ ಕಲ್ಪಿಸಲು ಸರ್ಕಾರ ಯಾವ ರೀತಿಯ ಕ್ರಮಗಳನ್ನು ಕೈಗೊಳ್ಳುವುದು ;

(ಈ) ಎಷ್ಟು ಕಾಲಾವಧಿಯಲ್ಲಿ ಕ್ರಮ ಜರುಗಿಸಲಾಗುವುದು ?

**ವಿ. ಶ್ರೀಶ್**
ಕಾರ್ಯದರ್ಶಿ
ಕರ್ನಾಟಕ ವಿಧಾನ ಪರಿಷತ್ತು

ಸರ್ಕಾರಿ ಮುದ್ರಣಾಲಯ, ಬೆಂಗಳೂರು, ಪಿ7, ಕಾ.ಸೂ. 240, ಪ್ರತಿಗಳು 1500